# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆಯ ಟಿಶ್ಯೂ ಲ್ಯಾಮಿನೇಶನ್ ಕಾರ್ಯಕ್ಕೆ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:** ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ಇವರ ಪತ್ರ ಸಂಖ್ಯೆ: ಕೆಎಸ್ಎ/ 17011/2/2019/ಕೆಎಸ್ಎ/ಎಡಿಎಂ, ದಿನಾಂಕ: 23.01.2020.

********

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ಇವರು ಪತ್ರಾಗಾರ ಇಲಾಖೆಯಲ್ಲಿ 2019-20ನೇ ಸಾಲಿನ ಟಿಶ್ಯೂ ಲ್ಯಾಮಿನೇಶನ್ ಕಾರ್ಯಕ್ರಮವನ್ನು ಈ ಪ್ರಕ್ಯೂರ್‌ಮೆಂಟ್ ಟೆಂಡರ್ ಮೂಲಕ ಕರೆಯಲಾಗಿದ್ದು, ಅತೀ ಕಡಿಮೆ ದರ ನಮೂದಿಸಿದ ಮೆ:ಫೋಟೋಲ್ಯಾಮ್ ಸಿಸ್ಟಮ್ಸ್, ಚೆನ್ನೈ, ಇವರಿಗೆ ದಿನಾಂಕ: 11.10.2019 ರಂದು ಕಾರ್ಯನಿರ್ವಹಿಸಲು ಕಾರ್ಯಾದೇಶ ನೀಡಲಾಗಿದ್ದು, ಸದರಿ ಕಾರ್ಯದ ಒಟ್ಟು ವೆಚ್ಚ ರೂ.49.00ಲಕ್ಷಗಳಾಗಿದ್ದು, ಸದರಿ ಸಂಸ್ಥೆಯವರು ಟಿಶ್ಯೂ ಲ್ಯಾಮಿನೇಶನ್ ಕಾರ್ಯವು ಪೂರ್ಣಗೊಂಡಿರುತ್ತದೆ ಎಂದು ಪತ್ರವನ್ನು ನೀಡಿದ್ದು, ಈ ಬಗ್ಗೆ ಕಚೇರಿಯಲ್ಲಿ ಟಿಶ್ಯೂ ಲ್ಯಾಮಿನೇಶನ್ ಪ್ರಗತಿ ಕಾರ್ಯದ ಬಗ್ಗೆ ದಿನಾಂಕ: 09.12.2019 ರಂದು ತಾಂತ್ರಿಕ ಸಲಹಾ ಸಮಿತಿ ಕರೆದಿದ್ದು, ಸದರಿ ಸಲಹಾ ಸಮಿತಿಯಲ್ಲಿ ಸದರಿ ಕಾರ್ಯದ ಬಗ್ಗೆ ಚರ್ಚಿಸಿ ತೃಪ್ತಿಕರವಾಗಿರುತ್ತದೆ ಎಂದು ತೀರ್ಮಾನಿಸಲಾಗಿರುತ್ತದೆ.

ಮುಂದುವರೆದು, ಸದರಿ ಸಂಸ್ಥೆಯವರಿಗೆ ಹಣ ಪಾವತಿಸಬೇಕಾಗಿದ್ದು ರೂ.49.00ಲಕ್ಷಗಳ ಹಣ ಬಿಡುಗಡೆಗೆ ಸರ್ಕಾರದ ಅನುಮತಿ ಆದೇಶ ನೀಡಬೇಕೆಂದು ಸರ್ಕಾರವನ್ನು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಕಸಂವಾ 04 ರಾಪಸ ಆಕ 2020, ಬೆಂಗಳೂರು, ದಿನಾಂಕ:31.01.2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2019-20ನೇ ಸಾಲಿನ ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆಯಲ್ಲಿ ಟಿಶ್ಯೂ ಲ್ಯಾಮಿನೇಶನ್ ಕಾರ್ಯವನ್ನು ಪೂರ್ಣಗೊಳಿಸಿರುವ ಮೆ:ಫೋಟೋಲ್ಯಾಮ್ ಸಿಸ್ಟಮ್ಸ್, ಚೆನ್ನೈ, ಇವರಿಗೆ ರೂ.49.00ಲಕ್ಷ (ರೂಪಾಯಿ ನಲವತ್ತೊಂಭತ್ತು ಲಕ್ಷಗಳು ಮಾತ್ರ)ಗಳನ್ನು ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ಇವರ ಮುಖಾಂತರ ಬಿಡುಗಡೆ ಮಾಡಲು ಆದೇಶಿಸಿದೆ.

ಸದರಿ ಅನುದಾನವನ್ನು 2019-20ನೇ ಸಾಲಿನ ಲೆಕ್ಕಶೀರ್ಷಿಕೆ: 2205-00-104-0-01-059ರಡಿಯಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 2020, ದಿನಾಂಕ: 13.01.2020 ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ.

(ಹೆಚ್.ಕೆ.ಸುರೇಶಬಾಬು)
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ ಮತ್ತು ಸಂಸ್ಕೃತಿ ಇಲಾಖೆ,
(ಆಡಳಿತ ಕನ್ನಡ).

**ಪ್ರತಿಯನ್ನು:**

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್.ಎಸ್.ಎ), (ಇ & ಆರ್.ಎಸ್.ಇ)ಕರ್ನಾಟಕ, ಹೊಸ ಕಟ್ಟಡ "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-560001.

....2

2. ಪ್ರಧಾನ ಮಹಾಲೇಖಪಾಲರು (ಎ &ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5329, ಬೆಂಗಳೂರು-560001.
3. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸಸೌಧ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿಗಳ ಆಪ್ತ ಶಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ವಿಕಾಸಸೌಧ,
5. ಸರ್ಕಾರದ ಉಪಕಾರ್ಯದರ್ಶಿಯವರ ಆಪ್ತ ಶಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ವಿಕಾಸಸೌಧ,
6. ಸಮನ್ವಯ ಶಾಖೆ/ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.